7.3.22 47

ಕರ್ನಾಟಕ ವಿಧಾನ ಪರಿಷತ್ ಸದಸ್ಯರಾದ ಡಾ: ವೈ.ಎ. ನಾರಾಯಣಸ್ವಾಮಿ ರವರ ನಿಯಮ 72ರಡಿಯಲ್ಲಿ ಮಂಡಿಸಿರುವ ಸೂಚನೆಗೆ ಉತ್ತರ

********

ಪ್ರಶ್ನೆ: ಬೆಂಗಳೂರು ನಗರದಲ್ಲಿ ಅಕ್ರಮವಾಗಿ ನೆಲೆಸಿರುವ ವಿದೇಶಿ ಪ್ರಜೆಗಳು ಕಾನೂನು ಬಾಹಿರ ಚಟುವಟಿಕೆಗಳನ್ನು ನಡೆಸುತ್ತಿದ್ದು, ಇದರಿಂದಾಗಿ ಬೆಂಗಳೂರಿನ ನಾಗರಿಕರ ನೆಮ್ಮದಿ ಕೆಡಿಸಿರುವ ವಿಷಯದ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯಲು (ಸದನದಲ್ಲಿ ಪ್ರಸ್ತಾಪಿಸ)ಬಯಸುತ್ತೇನೆ.

ಉತ್ತರ:-

- ಬೆಂಗಳೂರು ನಗರದಲ್ಲಿ ಅಕ್ರಮವಾಗಿ ನೆಲೆಸಿರುವ ವಿದೇಶಿ ಪ್ರಜೆಗಳು ಕಾನೂನು ಬಾಹಿರ ಚಟುವಟಿಕೆಗಳಲ್ಲಿ ತೊಡಗಿರುವ ಬಗ್ಗೆ ಕಳೆದ ಮೂರು ವರ್ಷಗಳಿಂದ 296 ಪ್ರಕರಣಗಳನ್ನು ದಾಖಲಿಸಿದ್ದು, 441 ಜನ ವಿದೇಶಿ ಪ್ರಜೆಗಳ ವಿರುದ್ಧ ಕ್ರಮ ಜರುಗಿಸಿರುವ ಬಗ್ಗೆ ಪ್ರಾದೇಶಿಕ ವಿದೇಶಿ ನೋಂದಣಿ ಕಚೇರಿ(FRRO)ಯಿಂದ ಮಾಹಿತಿ ಪಡೆಯಲಾಗಿರುತ್ತದೆ. ಪ್ರಕರಣ ದಾಖಲಿಸಲಾದ ವಿದೇಶಿ ಪ್ರಜೆಗಳ ಪ್ರಕರಣವು ನ್ಯಾಯಾಲಯದಲ್ಲಿ ಇತ್ಯರ್ಥವಾಗುವವರೆಗೂ ಸಂಬಂಧಪಟ್ಟ ಇಲಾಖೆಯಿಂದ ನಿರ್ಗಮನ ಪರವಾನಿಗೆ(Exit Permit)ಯನ್ನು ಪಡೆಯುವವರೆಗೆ ಸದರಿಯವರುಗಳನ್ನು ಡಿಟೆಂಷನ್ ಸೆಂಟರ್ (Detention Centre)ನಲ್ಲಿ ಇರಿಸಿ, ಪ್ರಕರಣ ಇತ್ಯರ್ಥವಾದ ನಂತರ ಸದರಿ ವಿದೇಶಿ ಪ್ರಜೆಯ ಗಡಿಪಾರು ನಿಯಮವನ್ನು ಪಾಲಿಸಲಾಗುತ್ತಿದೆ.

- ಬೆಂಗಳೂರು ನಗರದಲ್ಲಿ ಡಿಸೆಂಬರ್ ಮಾಹೆಯ ಅಂತ್ಯಕ್ಕೆ ಒಟ್ಟು 672 ಜನ ಅಕ್ರಮ ವಿದೇಶಿ ಪ್ರಜೆಗಳು ವಾಸವಾಗಿರುವ ಬಗ್ಗೆ ಪ್ರಾದೇಶಿಕ ವಿದೇಶಿ ನೋಂದಣಾಧಿಕಾರಿ ಕಚೇರಿ(FRRO)ಯಿಂದ ಮಾಹಿತಿಯನ್ನು ಪಡೆಯಲಾಗಿದೆ. ಸದರಿ ವಿದೇಶಿ ಪ್ರಜೆಗಳು ಕಾನೂನುಬಾಹಿರ ಚಟುವಟಿಕೆಗಳಲ್ಲಿ ತೊಡಗುವುದನ್ನು ತಡೆಗಟ್ಟುವ ನಿಟ್ಟಿನಲ್ಲಿ, ಅವರುಗಳನ್ನು ಪತ್ತೆಮಾಡುವ ಸಲುವಾಗಿ ಅಕ್ರಮವಾಗಿ ನೆಲೆಸಿರುವ ವಿದೇಶಿ ಪ್ರಜೆಗಳ ಮಾಹಿತಿಯನ್ನು ವಿಭಾಗೀಯ ಉಪ-ಪೊಲೀಸ್ ಆಯುಕ್ತರುಗಳಿಗೆ ಕಳುಹಿಸಿ, ಅವರುಗಳನ್ನು ಪತ್ತೆ ಮಾಡಿ ಕ್ರಮ ಕೈಗೊಳ್ಳುವಂತೆ ಹಾಗೂ ಬೆಂಗಳೂರು ನಗರದಲ್ಲಿ ಅನಧಿಕೃತವಾಗಿ/ಅವಧಿ ಮೀರಿ ವಾಸವಾಗಿರುವ ವಿದೇಶಿ ಪ್ರಜೆಗಳನ್ನು ಪತ್ತೆ ಮಾಡಲು ಠಾಣೆಗಳಿಂದ ನುರಿತ ಅಧಿಕಾರಿ ಮತ್ತು ಸಿಬ್ಬಂದಿಯವರುಗಳ ತಂಡ ರಚಿಸಿ ಕ್ರಮ ಕೈಗೊಳ್ಳುವಂತೆ ಸೂಚಿಸಲಾಗಿರುತ್ತದೆ.

ಸಂಖ್ಯೆ: ಒಇ 56 ಪಿಎಂಎಸ್ 2022

(ಆರಗ ಜ್ಞಾನೇಂದ್ರ)

ಗೃಹ ಸಚಿವರು